# 3ನೇ ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ
# ಚನ್ನರಾಯಪಟ್ಟಣ

**ಸಿ.ಸಿ.ಃ 973/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ | ಶಿವರಾಜು | C.W – 3 |
| ತಂದೆಯ ಹೆಸರು | ಃ | ಮಂಜೇಗೌಡ | P.W – 2 |
| ವಯಸ್ಸು | ಃ | 33 ವರ್ಷ | |
| ಉದ್ಯೋಗ | ಃ | ವ್ಯವಸಾಯ | ಪ್ರಮಾಣ ವಚನ ಬೋಧಿಸಲಾಯಿತು |
| ವಾಸ | ಃ | ತೋಟದ ಮನೆ, ಸಬ್ಬನಹಳ್ಳಿ | ದಿನಾಂಕಃ 11-12-2019 |

## ಮುಖ್ಯ ವಿಚಾರಣೆಃ– ನುರಿತ ಎ.ಪಿ.ಪಿ., ಯವರಿಂದ

ಚಾಸಾ-1 ನನ್ನ ಹೆಂಡತಿ. ದಿಃ 14-06-2015 ರಂದು ಬೆಳಿಗ್ಗೆ 7.30 ಗಂಟೆ ಸಮಯದಲ್ಲಿ ಚಾಸಾ-1 ರವರು ತೋಟಕ್ಕೆ ಹೋಗುತ್ತಿದ್ದಾಗ ಯಾರೋ ಇಬ್ಬರು ವ್ಯಕ್ತಿಗಳು ಚಾಸಾ-1 ರವರ ಎಡಕೆನ್ನೆಗೆ ಹೊಡೆದು 45 ಗ್ರಾಂ. ಚಿನ್ನದ ಮಾಂಗಲ್ಯ ಸರವನ್ನು ಕಿತ್ತುಕೊಂಡು ಹೋದ ಬಗ್ಗೆ ಗೊತ್ತಾಗಿದೆ. ನಂತರ ನಾನು ಸ್ಥಳಕ್ಕೆ ಬಂದು ಚಾಸಾ-1 ರವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ. ನಂತರ ಪೊಲೀಸರಿಗೆ ನಾನೇ ದೂರು ನೀಡಿರುತ್ತೇನೆ. ದೂರು ನೀಡಿದ ದಿನ ಸಂಜೆ ಪೊಲೀಸರು ಸ್ಥಳಕ್ಕೆ ಬಂದು ಮಹಜರ್ ಜರುಗಿಸಿರುತ್ತಾರೆ. ಮಹಜರ್ ನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಪೊಲೀಸರಿಗೆ ಹೇಳಿಕೆಯನ್ನು ನೀಡಿಲ್ಲ.

*(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ನುರಿತ ಎಪಿಪಿ ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)*

ಪಾಟೀಸವಾಲುಃ ಎಪಿಪಿ ಯವರಿಂದ

ದಿಃ 14-06-2015 ರಂದು ಬೆಳಿಗ್ಗೆ 7.30 ಗಂಟೆಯಲ್ಲಿ ಚಾಸಾ-1 ರವರು ತೋಟಕ್ಕೆ ಕೊತ್ತನಹಳ್ಳಿ ರಸ್ತೆಯ ಮುಖಾಂತರ ನಡೆದುಕೊಂಡು ಹೋಗುತ್ತಿರುವಾಗ ಹಲ್ಲೆ ಮಾಡಿ ಸರ ಕಿತ್ತುಕೊಂಡು ಹೋದ ಬಗ್ಗೆ ಗೊತ್ತಾಗಿರುತ್ತದೆ ಎಂದರೆ ಸರಿ. ಚಾಸಾ-1 ರವರೇ ಆಸ್ಪತ್ರೆಯಲ್ಲಿ

ಹೇಳಿಕೆಯ ಮುಖಾಂತರ ದೂರು ನೀಡಿದ್ದಾರೆ ಎಂದರೆ ಸರಿಯಲ್ಲ, ನಾನೇ ನೀಡಿದ್ದೇನೆ. ದೂರು ನೀಡಿದ ನಂತರ ಅದೇ ದಿನ ಮಧ್ಯಾಹ್ನ 12.15 ರಿಂದ 1.00 ಗಂಟೆ ಸಮಯದಲ್ಲಿ ಪೊಲೀಸರು ಸ್ಥಳಕ್ಕೆ ಬಂದು ಮಹಜರ್ ಜರುಗಿಸಿರುತ್ತರೆಂಬುದು ಗೊತ್ತಿಲ್ಲ. ಎಲ್ಲಾ ವಿಚಾರ ತಿಳಿದು ನಿಪಿ-4 ಕ್ಕೆ ಸಹಿ ಮಾಡಿದ್ದೇನೆಂದರೆ ಸರಿಯಲ್ಲ. ಪೊಲೀಸರಿಗೆ ಓದಿ ಹೇಳಿದಂತೆ ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ-5 ಎಂದು ಗುರುತಿಸಲಾಯಿತು. ಪ್ರಕರಣ ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಅನುಕೂಲವಾಗುವ ಸಲುವಾಗಿ ಸುಳ್ಳು ಸಾಕ್ಷಿ ಹೇಳುತ್ತಿದೇನೆಂದರೆ ಸರಿಯಲ್ಲ.

ಪಾಟೀಸವಾಲುಃ ಶ್ರೀ ಹೆಚ್.ಜೆ.ಆರ್., ಆರೋಪಿತರ ಪರ ವಕೀಲರಿಂದ

ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ.

ಮರುವಿಚಾರಣೆ - ಇಲ್ಲ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಸ.ಇ.ಎ.ಒ.,

3 ನೇ ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ಚನ್ನರಾಯಪಟ್ಟಣ.